All India Radio: Bangalore
Regional Bulletin In Kannada
29.09.2025 / 6.40 p.m.
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧. ಕಲ್ಯಾಣ ಕರ್ನಾಟಕದಲ್ಲಿ ಪ್ರವಾಹ ಪರಿಸ್ಥಿತಿ; ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ವೈಮಾನಿಕ ಸಮೀಕ್ಷೆ

೨. ಪ್ರವಾಹ ಸಂತ್ರಸ್ಥ ಜಿಲ್ಲೆಗಳಿಗೆ ಸರ್ಕಾರ ೩ ಸಾವಿರ ಕೋಟಿ ರೂಪಾಯಿ ಪರಿಹಾರ ನೀಡುವಂತೆ ಬಿಜೆಪಿ ಆಗ್ರಹ

೩. ಸಮೀಕ್ಷೆ ಬಹಿಷ್ಕರಿಸುವಂತೆ ಬಿಜೆಪಿ ನಾಯಕರ ಕರೆಗೆ ಸರ್ಕಾರ ಅಸಮಾಧಾನ

೪. ಮುಡಾ ಪ್ರಕರಣದಲ್ಲಿ ಬಿ ರಿಪೋರ್ಟ್‌ಗೆ ಆಕ್ಷೇಪ - ಅಕ್ಟೋಬರ್ ೮ಕ್ಕೆ ಆದೇಶ ಕಾಯ್ದಿರಿಸಿದ ಜನಪ್ರತಿನಿಧಿಗಳ ನ್ಯಾಯಾಲಯ

೫. ಕರಾವಳಿ ಜಿಲ್ಲೆಗಳಲ್ಲಿ ಇಂದಿನಿಂದ ಅಕ್ಟೋಬರ್ ೫ರವರೆಗೆ ವ್ಯಾಪಕ ಮಳೆ - ಹವಾಮಾನ ಇಲಾಖೆ

***************

ಕಲ್ಯಾಣ ಕರ್ನಾಟಕದಲ್ಲಿ ಮಳೆ ಹಾಗೂ ಪ್ರವಾಹದಿಂದಾಗಿ ಜನಜೀವನ ಅಸ್ತವ್ಯಸ್ತವಾಗಿದೆ. ಯಾದಗಿರಿ ಜಿಲ್ಲೆಯಾದ್ಯಂತ ಕಳೆದ ೭ ದಿನಗಳಲ್ಲಿ ೧೨೨ ಮಿಲಿ ಮೀಟರ್ ಮಳೆಯಾಗಿದೆ. ಮಹಾರಾಷ್ಟ್ರದಲ್ಲಿ ಸುರಿಯುತ್ತಿರುವ ಮಳೆಯಿಂದಾಗಿ ಧನೆಗಾಂವ್ ಆಣೆಕಟ್ಟೆಯಿಂದ ಹೆಚ್ಚುವರಿಯಾಗಿ ಮಾಂಜ್ರಾ ನದಿಗೆ ನೀರು ಹರಿಸಿರುವುದರಿಂದ ಜಿಲ್ಲೆಯಾದ್ಯಂತ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಈಗಾಗಲೇ ಜಿಲ್ಲಾಡಳಿತ ಬೆಳೆ ಹಾನಿಯಾಗಿರುವ ಜಂಟಿ ಸಮೀಕ್ಷೆ ಕಾರ್ಯವನ್ನು ಪೂರ್ಣಗೊಳಿಸಿ ಮೊದಲನೇ ಹಂತದ ಬೆಳೆ ಹಾನಿ ಜಂಟಿ ಸಮೀಕ್ಷೆ ವರದಿ ಸರ್ಕಾರಕ್ಕೆ ಸಲ್ಲಿಸಿದೆ. ಕಳೆದ ಮೂರು ದಿನಗಳಲ್ಲಿ ಭಾರಿ ಮಳೆಯಿಂದಾಗಿ ಜಿಲ್ಲೆಯಾದ್ಯಂತ ಒಟ್ಟು ೨೭ ಬ್ರಿಡ್ಜ್ ಗಳ ಮೇಲಿಂದ ನೀರು ಹರಿಯುತ್ತಿರುವುದರಿಂದ ಬೀದರ್, ಕಮಲನಗರ ಭಾಲ್ಕಿ , ಬಸವಕಲ್ಯಾಣ, ಹುಮನಾಬಾದ್, ಚಿಟಗುಪ್ಪಾ ಹಾಗೂ ಹುಲಸೂರ ರಸ್ತೆ ಸಂಪರ್ಕ ಕಡಿತಗೊಂಡಿದೆ. ಮುಂಗಾರು ಹಂಗಾಮಿನಲ್ಲಿ ವಿಜಯಪುರದಲ್ಲಿ ಸಾಮಾನ್ಯ ಮಳೆಗಿಂತ ಸರಾಸರಿ ಶೇಕಡಾ ೬೦ರಷ್ಟು ಹೆಚ್ಚು ಮಳೆಯಾಗಿದ್ದು, ವಿಶೇಷವಾಗಿ ಸೆಪ್ಟೆಂಬರ್-ತಿಂಗಳಿನಲ್ಲಿ ಸಾಮಾನ್ಯ ಮಳೆಗಿಂತ ೨೨೭ ಮಿಲೀ ಮೀಟರ್ ಹೆಚ್ಚಿಗೆ ಮಳೆಯಾಗಿದೆ. ಇದು ವಾಡಿಕೆಗಿಂತ ಶೇಕಡಾ ೭೩ರಷ್ಟು ಹೆಚ್ಚಾಗಿದೆ ಎಂದು ಸಚಿವ ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ವಿಜಯಪುರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭೀಮಾ ನದಿ ಪಾತ್ರಕ್ಕೆ ಅಂದಾಜು ೩.೫೦ ಲಕ್ಷ ಕ್ಯೂಸೆಕ್ ನೀರನ್ನು ಹರಿದು ಬಿಟ್ಟಿರುವುದರಿಂದ ಜಿಲ್ಲೆಯ ಇಂಡಿ ತಾಲೂಕಿನ ೮ ಗ್ರಾಮಗಳು ಮತ್ತು ಆಲಮೇಲ ತಾಲೂಕಿನ ೬ ಗ್ರಾಮಗಳಲ್ಲಿ ಪ್ರವಾಹ ಪರಿಸ್ಥಿತಿ ಉಂಟಾಗಿದೆ. ಒಟ್ಟು ೧೭ ಕಾಳಜಿ ಕೇಂದ್ರಗಳನ್ನು ಪ್ರಾರಂಭಿಸಲಾಗಿದೆ. ಒಟ್ಟು ೮೬೦ ಜನರನ್ನು ಸುರಕ್ಷಿತವಾಗಿ ಸ್ಥಳಾಂತರಿಸಿ ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳನ್ನು ನಿಯೋಜಿಸಿ, ವಸತಿ, ಉಪಹಾರ, ಊಟದ ಸೂಕ್ತ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ. ಕಲಬುರಗಿ ಜಿಲ್ಲೆಯಲ್ಲಿ ಕಳೆದ ಒಂದು ವಾರದಿಂದ ಎಡೆಬಿಡದೆ ಸುರಿಯುತ್ತಿರುವ ಮಳೆ ಹಾಗೂ ಭೀಮಾ ನದಿಯ ಪ್ರವಾಹದಿಂದಾಗಿ ಈ ಭಾಗದ ಜನರು ಹಾಗೂ ರೈತರು ಸಂಕಷ್ಟ ಎದುರಿಸುವಂತಾಗಿದೆ.

***************

ಮಳೆ ಹಾಗೂ ಪ್ರವಾಹದಿಂದಾಗಿ ಉತ್ತರ ಕರ್ನಾಟಕ ಭಾಗದಲ್ಲಿ ವಿಪರೀತ ಹಾನಿಯುಂಟಾದ ಹಿನ್ನೆಲೆಯಲ್ಲಿ ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ವೈಮಾನಿಕ ಸಮೀಕ್ಷೆ ನಡೆಸಲಿದ್ದಾರೆ. ಕಲಬುರಗಿ ವಿಮಾನ ನಿಲ್ದಾಣದಿಂದ ವೈಮಾನಿಕ ಸಮೀಕ್ಷೆ ಆರಂಭಿಸಲಿದ್ದಾರೆ. ವೈಮಾನಿಕ ಸಮೀಕ್ಷೆಯ ನಂತರ ಕಲಬುರಗಿ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಮುಖ್ಯಮಂತ್ರಿ ಸಭೆ ನಡೆಸಲಿದ್ದಾರೆ.

***************

ಉತ್ತರ ಕರ್ನಾಟಕದ ಜಿಲ್ಲೆಗಳಲ್ಲಿ ಪ್ರವಾಹದಿಂದ ಜನರು ತತ್ತರಿಸುವಂತಾಗಿದೆ. ರಾಜ್ಯ ಸರ್ಕಾರ ತಕ್ಷಣ ೩ ಸಾವಿರ ಕೋಟಿ ರೂಪಾಯಿ ಪರಿಹಾರ ಘೋಷಿಸುವಂತೆ ಪ್ರತಿಪಕ್ಷ ನಾಯಕ ಆರ್. ಅಶೋಕ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಲಬುರ್ಗಿ ಹಾಗೂ ಬೀದರ್‌ನಲ್ಲಿ ಹೆಚ್ಚು ಹಾನಿ ಉಂಟಾಗಿದೆ. ಸರ್ಕಾರದ ಬಳಿ ಹಣವಿಲ್ಲದೆ ಪರಿಹಾರ ನೀಡಲು ಮೀನಾಮೇಶ ಎಣಿಸುತ್ತಿದೆ ಎಂದು ಆರೋಪಿಸಿದ್ದಾರೆ. ಕೇಂದ್ರ ಸರ್ಕಾರ ತನ್ನ ಪಾಲಿನ ಪರಿಹಾರದ ಹಣ ನೀಡಲಿದೆ. ರಾಜ್ಯ ಸರ್ಕಾರ ತಕ್ಷಣ ೩ ಸಾವಿರ ಕೋಟಿ ರೂಪಾಯಿ ಪರಿಹಾರ ಘೋಷಿಸುವಂತೆ ಎಂದು ಆಗ್ರಹಿಸಿದ್ದಾರೆ. ಈ ನಡುವೆ ಬಿಜೆಪಿ ರಾಜ್ಯಾಧ್ಯಕ್ಷ ಬಿ ವೈ ವಿಜಯೇಂದ್ರ, ಬೀದರ್ ದಕ್ಷಿಣ ಹಾಗೂ ಬೀದರ್ ವಿಧಾನಸಭಾ ಕ್ಷೇತ್ರಗಳ ಮಳೆ ಹಾನಿಗೊಳಗಾದ ವಿವಿಧ ಭಾಗಗಳ ರೈತರ ಜಮೀನುಗಳಿಗೆ ಭೇಟಿ ನೀಡಿ ಬೆಳೆ ಹಾನಿ ಪರಿಶೀಲನೆ ನಡೆಸಿದರು. ಬಳಿಕ ಮಾತನಾಡಿದ ಅವರು ಸರ್ಕಾರ ಶೀಘ್ರ ಪರಿಹಾರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು.

***************

ಅತಿವೃಷ್ಟಿಯಿಂದ ಬೀದರ್ ಜಿಲ್ಲೆಯಲ್ಲಿ ತುಂಬಾ ಹಾನಿಯಾಗಿದ್ದು. ನೆರೆ ರಾಜ್ಯ ಮಹಾರಾಷ್ಟ್ರದ ಮುಖ್ಯಮಂತ್ರಿ ಸಮೀಕ್ಷೆ ನಡೆಸಿದ್ದಾರೆ. ನಮ್ಮ ರಾಜ್ಯದ ಮುಖ್ಯಮಂತ್ರಿಯೂ ಸಮೀಕ್ಷೆ ನಡೆಸಿ, ಪರಿಹಾರ ಒದಗಿಸಬೇಕು ಎಂದು ಕೇಂದ್ರ ರೇಲ್ವೆ ರಾಜ್ಯ ಖಾತೆ ಸಚಿವ ವಿ.ಸೋಮಣ್ಣ ಒತ್ತಾಯಿಸಿದ್ದಾರೆ. ಬೀದರ್ ಜಿಲ್ಲೆ ಬಸವಕಲ್ಯಾಣ ನಗರದ ಅಕ್ಕ ಮಹಾದೇವಿ ಕಾಲೇಜು ಆವರಣದಲ್ಲಿ ನಡೆಯುತ್ತಿರುವ ಶರನ್ನವರಾತ್ರಿ ದಸರಾ ಧರ್ಮ ಸಮ್ಮೇಳದಲ್ಲಿ ಮಾತನಾಡಿದ ಅವರು, ರಾಜ್ಯ ಸರ್ಕಾರ ಸಾಮಾಜಿಕ ಮತ್ತು ಆರ್ಥಿಕ ಸಮೀಕ್ಷೆ ಕೈಗೊಂಡಿದ್ದು, ಸಮೀಕ್ಷೆಯಲ್ಲಿ ಸ್ವಪ್ರತಿಷ್ಟೆ ಮರೆತು, ನಾವೆಲ್ಲಾ ಒಂದು ಎನ್ನುವುದು ತೋರಿಸಬೇಕಾಗಿದೆ ಎಂದು ತಿಳಿಸಿದ್ದಾರೆ.

***************

ಸಾಮಾಜಿಕ,ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಬಿಜೆಪಿಯ ನಾಯಕರು ಬಹಿಷ್ಕರಿಸುವಂತೆ ಕರೆ ನೀಡುತ್ತಿದ್ದಾರೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ರಾಜ್ಯ ಹಿಂದುಳಿದ ವರ್ಗಗಳ ಶಾಶ್ವತ ಆಯೋಗ ನಡೆಸುತ್ತಿರುವ ಸಮೀಕ್ಷೆ ಯಾವುದೇ ಒಂದು ಜಾತಿ-ಧರ್ಮಗಳಿಗೆ ಸೀಮಿತವಾದುದಲ್ಲ. ಇದು ರಾಜ್ಯದ ಏಳು ಕೋಟಿ ಜನರ ಸಾಮಾಜಿಕ",ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆಯಾಗಿದೆ . ಸರ್ವರಿಗೂ ಸಮಪಾಲು, ಸಮಬಾಳು ನೀಡುವುದಾಗಿದೆ ಎಂದು ಹೇಳಿದ್ದಾರೆ. ಸರ್ಕಾರ ನಡೆಸುವ ಸಮೀಕ್ಷೆಯಿಂದ ಕೇವಲ ಪರಿಶಿಷ್ಟ, ಹಿಂದುಳಿದ ಜಾತಿ ಮತ್ತು ಅಲ್ಪಸಂಖ್ಯಾತ ಸಮುದಾಯಗಳ ಸ್ಥಿತಿ-ಗತಿ ಮಾತ್ರವಲ್ಲ, ಮುಂದುವರಿದ ಜಾತಿಗಳೊಳಗಿನ ಬಡವರು ಮತ್ತು ಅವಕಾಶ ವಂಚಿತರ ಸ್ಥಿತಿಗತಿಯೂ ಗೊತ್ತಾಗಲಿದೆ. ಈ ವಾಸ್ತವಸ್ಥಿತಿ ಅರಿವಾಗುವುದು ಬಿಜೆಪಿಯವರಿಗೆ ಬೇಡವಾಗಿದೆ ಎಂದು ದೂರಿದ್ದಾರೆ. ಬಿಜೆಪಿ ನಾಯಕರ ಈ ಆತ್ಮವಂಚಕ ನಡವಳಿಕೆಯನ್ನು ರಾಜ್ಯದ ಜನತೆ ಅರ್ಥಮಾಡಿಕೊಳ್ಳಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಕುಟುಂಬ ಮುಡಾದಲ್ಲಿ ಪಡೆದ ೧೪ ನಿವೇಶನಗಳ ಸಂಬಂಧ ಲೋಕಾಯುಕ್ತ ಪೊಲೀಸರು ಸಲ್ಲಿಸಿದ್ದ ಬಿ-ರಿಪೋರ್ಟ್ ಪ್ರಶ್ನಿಸಿ ಸ್ನೇಹಮಯಿ ಕೃಷ್ಣ ಸಲ್ಲಿಸಿದ್ದ ಅರ್ಜಿಯ ಆದೇಶವನ್ನು ಜನಪ್ರತಿನಿಧಿಗಳ ನ್ಯಾಯಾಲಯ ಅಕ್ಟೋಬರ್ ೮ಕ್ಕೆ ಕಾಯ್ದಿರಿಸಿದೆ. ಸಾಮಾಜಿಕ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ತನಿಖಾಧಿಕಾರಿ ಬದಲಾವಣೆ ಮತ್ತು ತನಿಖಾಧಿಕಾರಿ ವಿರುದ್ಧ ಕ್ರಮಕೈಗೊಳ್ಳುವಂತೆ ಮನವಿ ಮಾಡಿ, ಜನಪ್ರತಿನಿಧಿಗಳ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿದ್ದರು. ಮುಡಾ ಪ್ರಕರಣದಲ್ಲಿ ಸರ್ವೇ ಸಂಖ್ಯೆಗಳ ಪ್ರಕಾರ ಪ್ರತ್ಯೇಕ ಪ್ರಕರಣಗಳನ್ನು ದಾಖಲಿಸಲು ನಿರ್ದೇಶನ ನೀಡಬೇಕು ಎಂದು ಅರ್ಜಿಯಲ್ಲಿ ಒತ್ತಾಯಿಸಲಾಗಿದೆ.

***************

ಮಂಡ್ಯದ ಕೆ.ಆರ್.ಎಸ್. ಜಲಾಶಯ ತುಂಬಿದ್ದು, ಕೆರೆಗಳಿಗೆ ನೀರು ತುಂಬಿಸುವ ಕೆಲಸ ಪ್ರಗತಿಯಲ್ಲಿದ್ದರೂ ಕೆಲವು ಕೆರೆಗಳು ತುಂಬಿರುವುದಿಲ್ಲ. ಕೆರೆಗಳಿಗೆ ಒಳಹರಿವಿಗೆ ತೊಂದರೆಯಿದ್ದಲ್ಲಿ ಪರಿಶೀಲಿಸಿ ಪರಿಹರಿಸುವಂತೆ

ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮನೋಜ್ ಕುಮಾರ್ ಮೀನಾ ತಿಳಿಸಿದ್ದಾರೆ. ಮಂಡ್ಯ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಅಧಿಕಾರಿಗಳೊಂದಿಗೆ ಸಭೆ ನಡೆಸಿ ಮಾತನಾಡಿದ ಅವರು, ಶೇಕಡ ೧೦೦ ರಷ್ಟು ಕೆರೆಗಳನ್ನು ತುಂಬಿಸಿದರೆ ಬಹಳಷ್ಟು ಸಮಸ್ಯೆಗಳು ಪರಿಹಾರವಾಗಲಿದೆ ಎಂದು ಸಲಹೆ ನೀಡಿದ್ದಾರೆ. ಅನ್ನ ಭಾಗ್ಯ ಹಾಗೂ ಗೃಹ ಲಕ್ಷ್ಮಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ತಲುಪಿಸಬೇಕು. ಅನರ್ಹರನ್ನು ಕೈಬಿಡಬೇಕು ಎಂಬ ಉದ್ದೇಶದಿಂದ ಸರ್ಕಾರದಿಂದ ಸಲಹೆ ಹಾಗೂ ಸೂಚನೆಗಳನ್ನು ನೀಡಲಾಗಿದೆ. ಅವುಗಳನ್ನು ಕಟ್ಟುನಿಟ್ಟಾಗಿ ಅನುಸರಿಸಿ ಎಂದು ಸೂಚನೆ ನೀಡಿದರು. ಜಿಲ್ಲಾಧಿಕಾರಿ ಡಾ. ಕುಮಾರ ಅವರು ಸಭೆಗೆ ಮಳೆಯ ಪ್ರಮಾಣ, ಬಿತ್ತನೆ ಬೀಜ, ಬೆಳೆ ಹಾನಿ, ಮನೆ ಹಾನಿ ಪ್ರಕರಣ, ರಸಗೊಬ್ಬರ, ಆಧಾರ್ ಸೀಡಿಂಗ್, ಭೂ ಸುರಕ್ಷಾ ಯೋಜನೆ ಹಾಗೂ ಮಿಮ್ಸ್ ನಲ್ಲಿ ಕೈಗೊಳ್ಳಬೇಕಿರುವ ಕೆಲಸಗಳ ಬಗ್ಗೆ ಸಭೆಗೆ ವಿವರಿಸಿದರು.

***************

ಬೆಳಗಾವಿ ಜಿಲ್ಲೆಯ ವಿವಿಧ ಇಲಾಖೆಗಳ ಯೋಜನೆಗಳಡಿಯಲ್ಲಿ ಬ್ಯಾಂಕುಗಳಲ್ಲಿ ಸಲ್ಲಿಕೆಯಾದ ಸಾಲದ ಅರ್ಜಿಗಳನ್ನು ಶೀಘ್ರದಲ್ಲಿ ವಿಲೇವಾರಿಗೊಳಿಸಿ ಅರ್ಹರಿಗೆ ಸಾಲ ಮಂಜೂರು ಮಾಡಬೇಕು ಎಂದು ಜಿಲ್ಲಾ ಬ್ಯಾಂಕ್ ಅಧಿಕಾರಿಗಳಿಗೆ ಸಂಸದ ಜಗದೀಶ್ ಶೆಟ್ಟರ್ ನಿರ್ದೇಶನ ನೀಡಿದ್ದಾರೆ. ಬೆಳಗಾವಿ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಇಂದು ನಡೆದ ಲೀಡ್ ಬ್ಯಾಂಕ್ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು ಪಿಎಂಜೆಜೆಬಿವೈ, ಪಿಎಂಎಸ್‌ಬಿವೈ ಮತ್ತು ಎಪಿವೈ ಕಾರ್ಯಕ್ರಮಗಳನ್ನು ಹೆಚ್ಚಿನ ಮಟ್ಟದಲ್ಲಿ ಜನರಿಗೆ ತಲುಪುವಂತೆ ಚಟುವಟಿಕೆಗಳನ್ನು ಹಮ್ಮಿಕೊಳ್ಳುವುದು ಮತ್ತು ರೈತರು ಬೆಳದಂತಹ ಫಸಲುಗಳನ್ನು ನೈಸರ್ಗಿಕ ವಿಕೋಪಕಗಳಿಂದ ಕಾಪಾಡಿಕೊಳ್ಳಲು ಕಡ್ಡಾಯವಾಗಿ ಎಲ್ಲ ರೈತರನ್ನು ಪ್ರಧಾನ ಮಂತ್ರಿ ಫಸಲು ವಿಮಾ ಯೋಜನೆಯಡಿ ಒಳಗೊಳ್ಳುವಂತೆ ನೋಡಿಕೊಳ್ಳಬೇಕೆಂದು ಜಗದೀಶ್ ಶೆಟ್ಟರ್ ತಿಳಿಸಿದ್ದಾರೆ.

***************

ಕಲ್ಯಾಣಿಗಳ ಸ್ವಚ್ಛತೆ ಹಾಗೂ ನೈರ್ಮಲ್ಯ ಕಾಪಾಡಲು ಎಲ್ಲರ ಸಹಕಾರ ಅಗತ್ಯ ಎಂದು ಮುಳಬಾಗಿಲು ಪೌರಾಯುಕ್ತ ವಿ.ಶ್ರೀಧರ್ ತಿಳಿಸಿದ್ದಾರೆ. ಸ್ವಚ್ಛತಾ ಹೀ ಸೇವಾ ಅಭಿಯಾನದಡಿ ಕೋಲಾರದ ಮುಳಬಾಗಿಲು ನಗರದಲ್ಲಿರುವ ವಿಠಲ ಕುಂಟೆ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಲ್ಯಾಣಿ ಮತ್ತು ಉದ್ಯಾನವನಗಳ ಸ್ವಚ್ಛತೆ ಹಾಗೂ ಮೂಲಭೂತ ಸೌಕರ್ಯಗಳನ್ನು ಹಂತ ಹಂತವಾಗಿ ಮಾಡಲಾಗುವುದು. ಇದರ ಮೊದಲ ಹೆಜ್ಜೆಯಾಗಿ ವಿಠಲ ಕುಂಟೆಯ ಸ್ವಚ್ಛತೆಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

***************

ಉತ್ತರ ಕನ್ನಡ ಜಿಲ್ಲೆಯಲ್ಲಿ ನಕಲಿ ವೈದ್ಯರ ಪತ್ತೆ ಕುರಿತಂತೆ ನಿರಂತರವಾಗಿ ಕಾರ್ಯಾಚರಣೆ ನಡೆಸುವಂತೆ ಮತ್ತು ಪತ್ತೆಯಾದ ನಕಲಿ ವೈದ್ಯರ ವಿರುದ್ಧ ಪೊಲೀಸ್ ಠಾಣೆಯಲ್ಲಿ ಎಫ್.ಐ.ಆರ್. ದಾಖಲು ಮಾಡುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಕೆ.ಪಿ.ಎಂ.ಇ ಜಿಲ್ಲಾ ನೊಂದಣಿ ಮತ್ತು ಕುಂದುಕೊರತೆ ನಿವಾರಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ನಕಲಿ ವೈದ್ಯರು ಚಿಕಿತ್ಸೆ ನೀಡುವುದು ಹಾಗೂ ಕ್ಲಿನಿಕ್ ನಡೆಸುವುದು ತುಂಬಾ ಅಪಾಯಕಾರಿಯಾಗಿದ್ದು ಇದನ್ನು ಅತ್ಯಂತ ಗಂಭಿರವಾಗಿ ಪರಿಗಣಿಸಲಾಗಿದೆ ಎಂದು ತಿಳಿಸಿದ್ದಾರೆ.

***************

ರಾಜ್ಯದ ಹಲವೆಡೆ ಮಳೆಯಾಗಿದೆ. ಇಂದಿನಿಂದ ಅಕ್ಟೋಬರ್ ೫ರವರೆಗೆ ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗಲಿದೆ. ಉತ್ತರ ಹಾಗೂ ದಕ್ಷಿಣ ಒಳನಾಡಿನ ಕೆಲವೆಡೆ ಅಲ್ಲಲ್ಲಿ ಮಳೆಯಾಗಲಿದೆ ಎಂದು ಹವಮಾನ ಇಲಾಖೆ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲೂ ಇಂದಿನಿಂದ ಅಕ್ಟೋಬರ್ ೫ರವರೆಗೆ ಕೆಲವೆಡೆ ಮಳೆಯಾಗಲಿದೆ ಎಂದು ಅವರು ತಿಳಿಸಿದ್ದಾರೆ.

***************